## ದಿನಾಂಕ: 10/02/2021 ರ ನೋಡಲ್ ಅಧಿಕಾರಿ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಂಖ್ಯೆ-135 ಪಾದರಾಯನಪುರ ವಾರ್ಡಿನ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಸಭೆಯಲ್ಲಿ ಹಾಜರಿದ್ದ ಅಧಿಕಾರಿಗಳ ಮತ್ತು ಸದಸ್ಯರುಗಳ ವಿವರಗಳು:**

| ಕ್ರ.ಸಂ. | ಅಧಿಕಾರಿ/ ನೌಕರರ ಹೆಸರು | ಪದನಾಮ |
|---|---|---|
| 1 | ಶ್ರೀ. ರವಿಕುಮಾರ್ | ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿ |
| 2 | ಶ್ರೀ. ಎಂ.ಎಸ್. ಉಮೇಶ್ | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-135 |
| 3 | ಶ್ರೀ. ಬಸವಲಿಂಗಯ್ಯ | ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 |
| 4 | ಶ್ರೀ. ವೆಂಕಟರಾಮ | ಕಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 |
| 5 | ಶ್ರೀ. ಪ್ರಕಾಶ್ | ಕೆಲಸ ಪರಿವೀಕ್ಷಕರು, ವಾರ್ಡ್ ಸಂಖ್ಯೆ: 135 |
| 6 | ಶ್ರೀ. ವೆಂಕಟೇಶ್ | ASI ಜೆ.ಜೆ.ಆರ್.ನಗರ |
| 7 | ಶ್ರೀ. ಸಯ್ಯದ್ ಲಿಯಾಖಲಿ | P.A. |
| 8 | ಶ್ರೀ. ರಿಯಾಜ್ ಪಾಷಾ | ವಾರ್ಡ್ ಸದಸ್ಯರು |
| 9 | ಶ್ರೀ. ಸಯ್ಯದ್ ವಜೀದ್ | ವಾರ್ಡ್ ಸದಸ್ಯರು |
| 10 | ಶ್ರೀ. ಅಫ್ರೋಜ್ ಖಾನ್ | ವಾರ್ಡ್ ಸದಸ್ಯರು |
| 11 | ಶ್ರೀ. ಅಫ್ಸರ್ ಪಾಷಾ | ವಾರ್ಡ್ ಸದಸ್ಯರು |

ವಾರ್ಡ್ ಸಮಿತಿಯ ಉದ್ದೇಶ ಮತ್ತು ಸಭೆಯ ಮಹತ್ವವನ್ನು ತಿಳಿಸಿ ಸಭೆಯಲ್ಲಿ ಉಪಸ್ಥಿತರಿದ್ದ ಅಧ್ಯಕ್ಷರು, ಸದಸ್ಯರು ಹಾಗೂ ಎಲ್ಲಾ ಅಧಿಕಾರಿಗಳನ್ನು ಸ್ವಾಗತಿಸಿ ಸಭೆಯನ್ನು ಪ್ರಾರಂಭಿಸಲಾಯಿತು.

1. ಹಿಂದಿನ ಸಭೆಯ ನಡವಳಿಗಳಲ್ಲಿದ್ದ ವಿಷಯಕ್ಕೆ ತೆಗೆದುಕೊಂಡ ಕ್ರಮದ ಬಗ್ಗೆ ಓದಿ ರೆಕಾರ್ಡ್ ಮಾಡಲಾಯಿತು. ದಾಖಲಿಸಲಾದ ವಿಷಯಗಳಲ್ಲಿ ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಜರೂರಾಗಿ ಕ್ರಮವಹಿಸುವಂತೆ ಸಂಬಂಧಿಸಿದವರಿಗೆ ಸೂಚಿಸಲಾಯಿತು.

2. **ಇಂದಿನ ಸಭೆಯಲ್ಲಿ ಮಾನ್ಯ ಅಧ್ಯಕ್ಷರ ಸಮ್ಮುಖದಲ್ಲಿ ಚರ್ಚಿಸಿದ ವಿಷಯಗಳು:**

| ಕ್ರ ಸಂ | ವಿಷಯಗಳು | ನಿರ್ಣಯ | ಕ್ರಮ ತೆಗೆದುಕೊಳ್ಳಬೇಕಾದ ಅಧಿಕಾರಿ |
|---|---|---|---|
| 1 | ವಾರ್ಡ್ ವ್ಯಾಪ್ತಿಯಲ್ಲಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಸಮರ್ಪಕವಾಗಿ ನಿರ್ವಹಣೆಯಾಗದೆ ಇರುವುದರಿಂದ ವಾರ್ಡ್ ವಾಯಾಪ್ತಿಯಲ್ಲಿ ಹಲವಾರು Blackspot ಉತ್ಪತ್ತಿಯಾಗುತ್ತಿದ್ದು ಹಾಗೂ ಅನಧೀಕೃತವಾಗಿ ತ್ಯಾಜ್ಯವನ್ನು ರಾಜಕಾಲುವೆಯಲ್ಲಿ ವಿಲೇವಾರಿ ಮಾಡುತ್ತಿರುವ ಬಗ್ಗೆ | ಈ ಬಗ್ಗೆ ಅಧ್ಯಕ್ಷರು ಸಭೆಯಲ್ಲಿ ಸುಧೀರ್ಘವಾಗಿ ಚರ್ಚಿಸಿ ಘನತ್ಯಾಜ್ಯ ಸಂಗ್ರಹಣೆ ಮತ್ತು ವಿಲೇವಾರಿ ಕಾರ್ಯವು ಸಮರ್ಪಕವಾಗಿ ನಿರ್ವಹಣೆ ಮಾಡಲು ಈ ಕಳಕಂಡ ಅಂಶಗಳ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳುವಂತೆ ತಿಳಿಸಿದರು.<br>1. ವಾರ್ಡ್ ವ್ಯಾಪ್ತಿಯಲ್ಲಿ ತ್ಯಾಜ್ಯ ಸಂಗ್ರಹಣೆ ಮಾಡಲು ಕಾರ್ಯಾದೇಶದಲ್ಲಿ ನಿಗಧಿಪಡಿಸಿರುವ ಆಟೋಟಿಪ್ಪರ್ ಬ್ಲಾಕ್‌ಗಳಲ್ಲಿ ಪ್ರತಿನಿತ್ಯ ನಿರ್ದೇಶನದ ಕಾರ್ಯಾವಧಿಯಲ್ಲಿ ಕಾರ್ಯ ನಿರ್ವಹಿಸುವುದು.<br>2. ಅನಧೀಕೃತವಾಗಿ ತ್ಯಾಜ್ಯವನ್ನು ರಾಜಕಾಲುವೆಗೆ ವಿಲೇವಾರಿ ಮಾಡುವುದನ್ನು ತಡೆಗಟ್ಟಲು ರಾಜಕಾಲುವೆ ಸುತ್ತಲೂ ತಡೆಗೋಡೆ ನಿರ್ಮಿಸುವುದು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಘನತ್ಯಾಜ್ಯ ವಿಭಾಗ, ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135, ಆರೋಗ್ಯ ವೈದ್ಯಾಧಿಕಾರಿ(ಚಾಮರಾಜಪೇಟೆ ವಿಭಾಗ), |

...ಪ್ರ.ತಿ.ನೋ

Scanned by CamScanner

| | | | |
|---|---|---|---|
| | | 3. ವಾರ್ಡ್ ವ್ಯಾಪ್ತಿಯಲ್ಲಿ ಅನಧೀಕೃತವಾಗಿ ತ್ಯಾಜ್ಯ ಸುರಿಯುವ ವ್ಯಾಪಾರಸ್ಥರು ಮತ್ತು ಸಾರ್ವಜನಿಕರಿಗೆ ದಂಡ ವಿಧಿಸಿ ಅರಿವು ಮೂಡಿಸುವುದು.<br>4. ಆರೋಗ್ಯ ವೈಧ್ಯಾಧಿಕಾರಿ ರವರ ಕಛೇರಿ ವತಿಯಿಂದ ವಾರ್ಡ್-135ಕ್ಕೆ ಪ್ರತ್ಯೇಕವಾಗಿ ಹಿರಿಯ ಆರೋಗ್ಯ ಪರಿವೀಕ್ಷಕರನ್ನು ನಿಯೋಜಿಸಲು ಕ್ರಮವಹಿಸುವುದು.<br>5. ವಾರ್ಡ್ ವ್ಯಾಪ್ತಿಯಲ್ಲಿ ಪ್ರಸ್ತುತ ಸಂಗ್ರಹಗೊಂಡಿರುವ ತ್ಯಾಜ್ಯ ಮತ್ತು Debris ನ್ನು ತೆರವುಗೊಳಿಸಿ ಮರು ಸಂಗ್ರಹಣೆಗೊಳ್ಳದ ಹಾಗೆ ನಿರ್ವಹಣೆ ಮಾಡುವುದು. | |
| 2 | ಫುಟ್‌ಪಾತ್‌ನಲ್ಲಿ ಅನಧೀಕೃತವಾಗಿ ವ್ಯಾಪಾರಸ್ಥರು ಸಂಗ್ರಹಿಸಿರುವ ಸಾಮಾಗ್ರಿಗಳನ್ನು ತೆರವುಗೊಳಿಸುವ ಬಗ್ಗೆ | ಈ ಬಗ್ಗೆ ಸಭೆಯಲ್ಲಿ ಎಲ್ಲಾ ಸಂಬಂಧಪಟ್ಟ ಇಲಾಖೆಗಳಾದ ಕಾಮಗಾರಿ, ಆರೋಗ್ಯ, ಘನತ್ಯಾಜ್ಯ, ಪೊಲೀಸ್ ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ ವಿಭಾಗದವರು ಒಟ್ಟಾಗಿ ದಿನಾಂಕ ನಿಗಧಿಪಡಿಸಿ ತೆರವು ಕಾರ್ಯಾಚರಣೆ ಕೈಗೊಳ್ಳು ಸಭೆಯಲ್ಲಿ ತಿಳಿಸಲಾಯಿತು. | ಸಹಾಯಕ ಕಾರ್ಯಪಾಲಕ ಅಭಿಯಂತರರು ಜೆಜೆಆರ್‌ನಗರ ಉಪವಿಭಾಗ, ಸಹಾಯಕ ಅಭಿಯಂತರರು ವಾರ್ಡ್:135, ಆರೋಗ್ಯ ವೈಧ್ಯಾಧಿಕಾರಿ (ಚಾಮರಾಜಪೇಟೆ ವಿಭಾಗ), ಸಹಾಯಕ ಕಾರ್ಯಪಾಲಕ ಅಭಿಯಂತರರು (SWM), ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ ಹಾಗೂ ಸಂಚಾರಿ ವಿಭಾಗ |
| 3 | BWSSB ಮತ್ತು BESCOM ವಿಭಾಗದ ವತಿಯಿಂದ ಅಧಿಕಾರಿಗಳು ಸಭೆ ನೋಟೀಸ್ ನೀಡಿದರು ಸಹಾ ಸಭೆಗೆ ಹಾಜರಾಗದಿರುವ ಬಗ್ಗೆ ಅಧ್ಯಕ್ಷರು ಗಮನಿಸಲಾಯಿತು. | ವಾರ್ಡ್ ಸಮಿತಿ ಸಭೆಯಲ್ಲಿ BWSSB ಮತ್ತು BESCOM ವ್ಯಾಪ್ತಿಯ ನೀರು ಮತ್ತು ಒಳಚರಂಡಿ ಮಂಡಳಿಗೆ ಸಂಬಂಧಪಟ್ಟ ದೂರುಗಳು ಬರುತ್ತಿದ್ದು ಈ ಬಗ್ಗೆ ಅಗತ್ಯ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳು ಸಭೆಗೆ ಹಾಜರಾಗದಿರುವುದರಿಂದ ಸಾರ್ವಜನಿಕರ ಕುಂದುಕೊರತೆ ನೀಗಿಸಲು ತೊಂದರೆಯಾಗುತ್ತಿರುವುದರಿಂದ ಸಂಬಂಧಪಟ್ಟ ಇಲಾಖೆಗಳಿಗೆ ಪತ್ರ ಮುಖೇನ ತಿಳಿಸಲು ಸಭೆಯಲ್ಲಿ ನಿರ್ದೇಶಿಸಲಾಯಿತು. | ಸಂಚಾಲಕರು ಮತ್ತು ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ-135, ಸಹಾಯಕ ಅಭಿಯಂತರರು BWSSB, ಕಾರ್ಯಪಾಲಕ ಅಭಿಯಂತರರು BESCOM |

ಮೇಲ್ಕಂಡ ಎಲ್ಲಾ ವಿಷಯಗಳೊಂದಿಗೆ ಕಾರ್ಯದರ್ಶಿಗಳು ಸಭೆಯನ್ನು ವಂದನಾರ್ಪಣೆಗಳೊಂದಿಗೆ ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿ ಮತ್ತು
ಸಹಾಯಕ ಅಭಿಯಂತರರು

ಅಧ್ಯಕ್ಷರು &
ನೋಡಲ್ ಅಧಿಕಾರಿ

Scanned by CamScanner

ಪ್ರತಿಯನ್ನು:-

1. ಮಾನ್ಯ ಆಡಳಿತಾಧಿಕಾರಿ, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
2. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
4. ಮಾನ್ಯ ಮುಖ್ಯ ಅಭಿಯಂತರರು (ಪಶ್ಚಿಮ) ಬಿಬಿಎಂಪಿ ರವರ ಅವಗಾಹನೆಗೆ ಸಲ್ಲಿಸಿದೆ.
5. ನೋಡಲ್ ಅಧಿಕಾರಿ, ವಾರ್ಡ್ ಸಂಖ್ಯೆ: 135 ಪಾದರಾಯನಪುರ ರವರ ಅವಗಾಹನೆಗೆ ಸಲ್ಲಿಸಿದೆ.
6. ಕಾರ್ಯಪಾಲಕ ಅಭಿಯಂತರರು, ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು (ವಿದ್ಯುತ್) ಪಶ್ಚಿಮ ವಿಭಾಗ, ಬಿಬಿಎಂಪಿ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಆರೋಗ್ಯ ವೈದ್ಯಾಧಿಕಾರಿ, ಚಾಮರಾಜಪೇಟೆ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಜೆಜೆಆರ್ ನಗರ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
10. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BWSSB) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
11. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು & ಸಹಾಯಕ ಅಭಿಯಂತರರು (BESCOM) ಪಾದರಾಯನಪುರ ವಲಯ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
12. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬೃಹತ್ ರಾಜಕಾಲುವೆ (SWD) ಪಶ್ಚಿಮ ವಲಯ ರವರ ಅವಗಾಹನೆಗೆ ಸಲ್ಲಿಸಿದೆ.
13. ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು (ಘನತ್ಯಾಜ್ಯ ನಿರ್ವಹಣೆ) ಚಾಮರಾಜಪೇಟೆ ವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
14. ಸಹ ಕಂದಾಯ ಅಧಿಕಾರಿ, ಚಾಮರಾಜಪೇಟೆ ಉಪವಿಭಾಗ ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
15. ಪೊಲೀಸ್ ಇನ್ಸ್‌ಪೆಕ್ಟರ್, ಕಾನೂನು ಮತ್ತು ಸುವ್ಯವಸ್ಥೆ, ಚಾಮರಾಜಪೇಟೆ/ವಿ.ವಿ.ಪುರಂ/ಸೆಂಟ್ರಲ್ ಪೊಲೀಸ್ ಠಾಣೆ, ಬೆಂಗಳೂರು ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
16. ಆರಕ್ಷಕ ನಿರೀಕ್ಷಕರು, ಜೆ.ಜೆ.ಆರ್. ನಗರ/ ಚಾಮರಾಜಪೇಟೆ ಸಂಚಾರಿ ವಿಭಾಗ, ಬೆಂಗಳೂರು ರವರ ಅವಗಾಹನೆಗೆ ಮತ್ತು ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
17. ವಾರ್ಡ್ ಸಂಖ್ಯೆ: 135 ಪಾದರಾಯನಪುರ ವಾರ್ಡ್ ಕಮಿಟಿ ಸದಸ್ಯರ ಮಾಹಿತಿಗಾಗಿ ಸಲ್ಲಿಸಿದೆ.

Scanned by CamScanner